# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/14/2021-22 ದಿನಾಂಕ: 17/04/2021.

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 17/04/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಾರ್ಡ್ ಸಮಿತಿ ಸದಸ್ಯರು**

1. ಶ್ರೀ ಅಮರ್ ಸಿಂಗ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
2. ಶ್ರೀ ವಿಜಯ್ ಬೆನಗಿ, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
3. ಶ್ರೀ ಸುಜಿತ್ ಸೋನಿಲ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
4. ಶ್ರೀ ಪ್ರಕಾಶ್ ಕೆ, ಸದಸ್ಯರು
5. ಶ್ರೀ ದಯಾಳ್, ಸದಸ್ಯರು
6. ಶ್ರೀ ಶ್ರೀನಿವಾಸ್, ಸದಸ್ಯರು
7. ಶ್ರೀ ಆರ್.ಎಂ. ಶ್ರೀನಿವಾಸ್, ಸದಸ್ಯರು
8. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
9. ಶ್ರೀ ಮಲ್ಯಾದಿ, ಸದಸ್ಯರು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ.ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ಬೆಂಗಳೂರು
4. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
5. ಶ್ರೀ ಸತ್ಯನಾರಾಯಣ, ಕಂದಾಯ ವಸೂಲಿಗಾರರು
6. ಶ್ರೀ ಮಹೇಶ್ ಕುಮಾರ್ ಎಲ್, ಕಿರಿಯ ಆರೋಗ್ಯ ಪರಿವೀಕ್ಷಕರು

**ಗೈರು ಹಾಜರಾಗಿರುವ ಅಧಿಕಾರಿಗಳು**

1. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ವಿದ್ಯಾರಣ್ಯಪುರ, ಬೆಂಗಳೂರು
2. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಯಲಹಂಕ ವಲಯ, ಬಿ.ಬಿ.ಎಂ.ಪಿ
3. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಯಲಹಂಕ ವಲಯ, ಬೆಂಗಳೂರು
4. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ)

ಮು.ತಿ.ನೋ..

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-** ಕೋವಿಡ್ 19 2ನೇ ಅಲೆ ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಕಡ್ಡಾಯವಾಗಿ ಕೋವಿಡ್-19 ಪರೀಕ್ಷೆಗೆ ಒಳಪಡುವುದು ಹಾಗೂ 45 ವರ್ಷಕ್ಕಿಂತ ಮೇಲ್ಪಟ್ಟವರು ವ್ಯಾಕ್ಸೀನ್ ಹಾಕಿಸಿಕೊಳ್ಳುವಂತೆ ತಿಳಿಸಿದರು.

ವಾರ್ಡ್ ನಂ.10ರ ವ್ಯಾಪಿಯಲ್ಲಿ ವಸತಿ ಸಮುಚ್ಚಯ ಹಾಗೂ ವಾಣಿಜ್ಯ ವಹಿವಾಟು ನಡೆಯುವ ಪ್ರದೇಶಗಳಲ್ಲಿ ಪ್ರತಿ ನಿತ್ಯ ನೂರಾರು ಜನ ಓಡಾಡುವ ಪ್ರಮೇಯ ಇರುವುದರಿಂದ ಕಡ್ಡಾಯವಾಗಿ ಕೋವಿಡ್-19 ರ ಮಾರ್ಗಸೂಚಿ (ಸಾರ್ವಜನಿಕರು 6 ಅಡಿ ಅಂತರವನ್ನು ಕಾಯ್ದುಕೊಳ್ಳುವುದು, ಮಾಸ್ಕ್ ಧರಿಸುವುದು, ಆಗಾಗ ಸ್ಯಾನಿಟೈಸರ್‌ಅನ್ನು ಉಪಯೋಗಿಸುವುದು) ಮುನ್ನೆಚ್ಚರಿಕಾ ಕ್ರಮಗಳನ್ನು ಅನುಸರಿಸಲು ತಿಳಿಸಿರುತ್ತಾರೆ.

ಸಭೆಗೆ ನೆರೆದಿದ್ದ ಸಾರ್ವಜನಿಕರು:- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸೋಂಕು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಔಷಧಿ ಸಿಂಪಡಿಸಲು ಕೋರಿದರು.

ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Sweetha . N K .
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 10, ದೊಡ್ಡಬೊಮ್ಮಸಂದ್ರ

17/4/2021
ನೋಡೆಲ್ ಅಧಿಕಾರಿ ವಾರ್ಡ್-10
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ/ಯೋಜನಾ ವಿಭಾಗ, ಬಿ.ಬಿ.ಎಂ.ಪಿ ರವರಿಗೆ ಸಲ್ಲಿಸಿದೆ.
5. ಕಛೇರಿ ಕಡತಕ್ಕೆ.